# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 141 |
| ಸದಸ್ಯರ ಹೆಸರು | ಶ್ರೀ ಐವನ್ ಡಿ' ಸೋಜಾ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 10.12.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕು ಪಾವೂರು ಉಳಿಯ ಗ್ರಾಮದಲ್ಲಿ ಅಕ್ರಮ ಮರಳುಗಾರಿಕೆ ವ್ಯಾಪಕವಾಗಿ ನಡೆಯುತ್ತಿದ್ದರೂ ಮರಳು ಮಾಫಿಯಾದವರು ಬೆದರಿಸಿ ಅಕ್ರಮ ಮರಳು ದಂದೆ ನಡೆಸುತ್ತಿದ್ದರೂ ಇಲಾಖೆಯು ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು; | • ದಕ್ಷಿಣ ಕನ್ನಡ ಜಿಲ್ಲೆ, ಉಳ್ಳಾಲ ತಾಲ್ಲೂಕು, ಪಾವೂರು ಕುದ್ರು ದ್ವೀಪ (CRZ ವ್ಯಾಪ್ತಿ) ದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅನಧಿಕೃತವಾಗಿ ಮರಳು ಗಣಿಗಾರಿಕೆ/ ಸಾಗಾಣಿಕೆ ವಿರುದ್ಧ ಜಿಲ್ಲಾ ಮರಳು ಸಮಿತಿಯಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗಿದ್ದು, ವಿವರಗಳು ಈ ಕೆಳಕಂಡಂತಿದೆ.<br>• ಸದರಿ ದ್ವೀಪ ಪ್ರದೇಶದಲ್ಲಿ ಅನಧಿಕೃತ ಮರಳು ಗಣಿ ಚಟುವಟಿಕೆಗಳನ್ನು ನಿಯಂತ್ರಿಸಲು ಇಲಾಖೆಯಿಂದ ಆಗಿಂದಾಗ್ಗೆ ಕಾರ್ಯಾಚರಣೆ ನಡೆಸಿ ದಿನಾಂಕ 26.09.2024 ರಿಂದ 09.10.2024 ರವರೆಗೆ ಒಟ್ಟು 04 ಪ್ರಕರಣಗಳನ್ನು ಪತ್ತೆ ಹಚ್ಚಿ, ಅಕ್ರಮವಾಗಿ ಮರಳು ತೆಗೆದು ಸಾಗಾಣಿಕೆ ಮಾಡಲು ಬಳಸುತ್ತಿದ್ದ ದೋಣಿಗಳು, ದೋಣಿ ಚಲಾಯಿಸುವ ಯಂತ್ರಗಳು ಸೇರಿದಂತೆ ಇನ್ನಿತರ ಪರಿಕರಗಳನ್ನು ವಶಪಡಿಸಿ ಕೊಂಡು ಸಂಬಂಧಪಟ್ಟವರ ವಿರುದ್ಧ ನ್ಯಾಯಾಲಯಗಳಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ.<br>• ಮುಂದುವರೆದು, ಉಳ್ಳಾಲ ತಾಲ್ಲೂಕು, ಪಾವೂರು ಕುದ್ರು ದ್ವೀಪ (CRZ ವ್ಯಾಪ್ತಿ) ದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪರಿಣಾಮಕಾರಿಯಾಗಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ತಾಲ್ಲೂಕು ಮರಳು ಸಮಿತಿಯ ಸದಸ್ಯ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ತನಿಖಾ ತಂಡಗಳನ್ನು ರಚಿಸಿಕೊಂಡು ಹಗಲು-ರಾತ್ರಿ ಗಸ್ತು ಕಾರ್ಯ ಕೈಗೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲಾಗುತ್ತಿದೆ. |

| | | |
|---|---|---|
| ಆ) | ಅಕ್ರಮ ಮರಳುಗಾರಿಕೆ ಯಿಂದ ಉಳಿಯ ಪಾವೂರು ದ್ವೀಪದ ಸುಮಾರು 40 ಎಕರೆ ಭೂಮಿ ನಾಶವಾಗಿದ್ದರೂ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು; | • ದಕ್ಷಿಣ ಕನ್ನಡ ಜಿಲ್ಲೆ, ಉಳ್ಳಾಲ ತಾಲ್ಲೂಕು, ಉಳಿಯ ದ್ವೀಪ (ಕುದ್ರು) ದ ಸುತ್ತಮುತ್ತಲಿನ ಎರಡು ಕಿ.ಮೀ. ವ್ಯಾಪ್ತಿಯ ಪ್ರದೇಶದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟುವ ಸಂಬಂಧ ಉಪ ವಿಭಾಗಾಧಿಕಾರಿ ಹಾಗೂ ಉಪವಿಭಾಗದ ದಂಡಾಧಿಕಾರಿ, ಮಂಗಳೂರು ಉಪವಿಭಾಗ ರವರು ಭಾರತೀಯ ನಾಗರೀಕ ಸುರಕ್ಷತಾ ಸಂಹಿತೆ, 2023 (ಬಿಎನ್‌ಎಸ್‌ಎಸ್) ಅಧಿನಿಯಮದ ಕಲಂ 152 ರನ್ವಯ ದಿನಾಂಕ 09.10.2024 ರಂದು ಮರಳು ಗಣಿಗಾರಿಕೆಯನ್ನು ನಿಷೇಧಿಸಿ ಆದೇಶ ಹೊರಡಿಸಿರುತ್ತಾರೆ.<br>• ಅಲ್ಲದೇ, ತಾಲ್ಲೂಕು ಮರಳು ಸಮಿತಿಯಿಂದ ಪೊಲೀಸ್ ಇಲಾಖೆಯ ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ ತನಿಖಾ ತಂಡಗಳು ಹಗಲು-ರಾತ್ರಿ ಗಸ್ತು ಕಾರ್ಯ ಕೈಗೊಂಡು ಸದರಿ ಪ್ರದೇಶದಲ್ಲಿ ಅನಧಿಕೃತ ಮರಳು ಗಣಿಗಾರಿಕೆ / ಸಾಗಾಣಿಕೆ ತಡೆಗಟ್ಟಲು ಕ್ರಮ ವಹಿಸಲಾಗುತ್ತಿದೆ. |
| ಇ) | ಇತ್ತೀಚೆಗೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಸಾಮಾಜಿಕ ಕಾರ್ಯಕರ್ತರಾದ ಶ್ರೀ ಅಲ್ವಿನ್ ಡಿ ಸೋಜಾ ರವರ ಮೇಲೆ ಸಾರ್ವಜನಿಕವಾಗಿ ಹಲ್ಲೆ ನಡೆಸಿ, ಕೊಲೆ ಬೆದರಿಕೆ ಹಾಕಿದ್ದು, ಗಣಿ ಇಲಾಖೆಗೆ ಅಕ್ರಮ ಮರಳು ದಂದೆಕೋರರ ಮಾಹಿತಿ ಇದ್ದರೂ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು? (ವಿವರ ನೀಡುವುದು) | ಗಣಿ ಮತ್ತು ಭೂವಿಜ್ಞಾನ ಇಲಾಖೆಯನ್ನೊಳಗೊಂಡಂತೆ ತಾಲ್ಲೂಕು ಮರಳು ಸಮಿತಿಯ ಸದಸ್ಯ ಇಲಾಖೆಯ ಅಧಿಕಾರಿಗಳ ತಂಡವು ದಿನಾಂಕ 04.10.2024 ರಂದು ಮಂಗಳೂರು ಮತ್ತು ಉಳ್ಳಾಲ ತಾಲ್ಲೂಕು ಪಾವೂರು-ಉಳಿಯ ಕುದ್ರುವಿನಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಸಿ ಸಾಗಾಣಿಕೆ ಮಾಡುತ್ತಿದ್ದ ಪ್ರದೇಶಗಳ ಮೇಲೆ ದಾಳಿ ನಡೆಸಿ, ನದಿ ಪಾತ್ರದಲ್ಲಿ ಮರಳು ತೆಗೆದು ಸಾಗಾಣಿಕೆಗೆ ಬಳಸುತ್ತಿದ್ದ ಮಾರಿಪಳ್ಳ ಗ್ರಾಮದ ವ್ಯಾಪ್ತಿಯಲ್ಲಿ ಹರಿಯುವ ನೇತ್ರಾವತಿ ನದಿ ಪಾತ್ರದಲ್ಲಿ 09 ದೋಣಿಗಳು, ಪುದು ಗ್ರಾಮ ವ್ಯಾಪ್ತಿಯ ಸರಹದ್ದಿನಲ್ಲಿ ಹರಿಯುವ ನೇತ್ರಾವತಿ ನದಿ ಪಾತ್ರದಲ್ಲಿ 06 ಮತ್ತು ತುಂಬೆ ಗ್ರಾಮದ ವ್ಯಾಪ್ತಿಯಲ್ಲಿ ಹರಿಯುವ ನೇತ್ರಾವತಿ ನದಿ ಪಾತ್ರದಲ್ಲಿ 06 ದೋಣಿಗಳು ಸೇರಿ ಒಟ್ಟು 21 ದೋಣಿಗಳನ್ನು ಮತ್ತು 06 ದೋಣಿ ಚಲಾಯಿಸುವ ಯಂತ್ರಗಳು ಹಾಗೂ 08 ಗ್ಯಾಸ್ ಸಿಲಿಂಡರ್‌ಗಳನ್ನು ಪತ್ತೆ ಹಚ್ಚಿ, ವಶಪಡಿಸಿಕೊಂಡು, ಅನಧಿಕೃತ ಮರಳುಗಾರಿಕೆ / ಸಾಗಾಣಿಕೆ ಮಾಡುತ್ತಿದ್ದವರ ವಿರುದ್ಧ ಮಾನ್ಯ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಬಂಟ್ವಾಳ ಇಲ್ಲಿ ದಿನಾಂಕ 09.10.2024 ರಂದು ಖಾಸಗಿ ಫಿರ್ಯಾದಿಯನ್ನು ದಾಖಲಿಸಿ, ಕ್ರಮ ಕೈಗೊಳ್ಳಲಾಗಿರುತ್ತದೆ. |

ಸಂಖ್ಯೆ ಸಿಐ -ಎಂಎಂಎನ್/289/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.